5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ದ.ಕ., ಮಂಗಳೂರು,
ಕಾರ್ಯನಿರ್ವಹಣೆ, ಪುತ್ತೂರು, ದ.ಕ.

## ಸೆಷನ್ಸ್ ಕೇಸ್ ನಂಬ್ರ **5017/2018**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಧರ್ಮಪಾಲ್ ಕೆ. | ಪ್ರಾಸಾಃ 16 |
| ತಂದೆಯ ಹೆಸರು | : | ದಿ. ಭೂಪಣ್ಣ ಗೌಡ | ಚಾಸಾಃ 27 |
| ಪ್ರಾಯ | : | 61 ವರ್ಷ | ದಿನಾಂಕಃ **14.03.2025** ರಂದು ಸಾಕ್ಷಿದಾರರಿಗೆ ಪ್ರಮಾಣವಚನ ಬೋಧಿಸಲಾಯಿತು. |
| ಉದ್ಯೋಗ | : | ನಿವೃತ್ತ ಸರಕಾರಿ ನೌಕರ | |
| ವಾಸಸ್ಥಳ | : | ಕಾಯ್ಮಣ ಗ್ರಾಮ, ಕಡಬ ತಾಲೂಕು. | |

ಮುಖ್ಯ ವಿಚಾರಣೆಃ  ಮಾನ್ಯ ಸರಕಾರಿ ಅಭಿಯೋಜಕರಿಂದಃ

ನಾನು ಜೂನ್ 2015  ರಿಂದ ಜೂನ್ 2022 ರ ವರೆಗೆ ಪುತ್ತೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೊಲೀಸ್ ಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿನಾಂಕ 15.11.2015 ರಂದು ನಾನು ರಾತ್ರಿ ಠಾಣಾ ಪ್ರಭಾರ ಕರ್ತವ್ಯದಲ್ಲಿದ್ದಾಗ ರಾತ್ರಿ ಸುಮಾರು 10.00 ಗಂಟೆ ಸಮಯಕ್ಕೆ ಪ್ರಾಸಾ.2 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಸ್ವೀಕರಿಸಿಕೊಂಡು ಅದರ ಆಧಾರದ ಮೇರೆಗೆ ಠಾಣಾ ಅಪರಾಧ ಕ್ರಮಸಂಖ್ಯೆ 181/2015 ರಲ್ಲಿ ಪ್ರಕರಣವನ್ನು ದಾಖಲಿಸಿಕೊಂಡು ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.  ನಂತರ ಪ್ರಕರಣದ ಕಡತವನ್ನು ಚಾಸಾ.32 ರವರಿಗೆ ಹಸ್ತಾಂತರಿಸಿರುತ್ತೇನೆ.  ಸಾಕ್ಷಿಯು ತಾನು ಸ್ವೀಕರಿಸಿದ ದೂರನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಶಾನೆ ಪಿ-3 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು.  ಸಾಕ್ಷಿಯು ತಾನು ದಾಖಲಿಸಿಕೊಂಡಿದ್ದ ಪ್ರಥಮ ವರ್ತಮಾನ ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಶಾನೆ ಪಿ-24 ಹಾಗೂ ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-24(ಎ) ಎಂದು ಗುರುತಿಸಲಾಯಿತು.

<u>ಪಾಟೀ ಸವಾಲುಃ **1** ಮತ್ತು **2**ನೇ ಆರೋಪಿತರ ಪರ ಶ್ರೀ ಎಂ.ವಿ.ಜಿ. ವಕೀಲರಿಂದಃ</u>

3. ನಿಶಾನೆ ಪಿ-3 ಪಿರ್ಯಾದಿದಾರರ ಕೈಬರಹದಲ್ಲಿರುತ್ತದೆ. ನಾನು ಸುಳ್ಳು ದೂರನ್ನು ಸ್ವೀಕರಿಸಿ ಪಿರ್ಯಾದುದಾರರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಆ ದೂರಿಗೂ ಆರೋಪಿತರಿಗೂ ಯಾವುದೇ ರೀತಿಯ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ.

<u>ಮರುವಿಚಾರಣೆಃ</u> ಇಲ್ಲ.

(ಸಾಕ್ಷಿದಾರರ ಹೇಳಿಕೆಯಂತೆ ನನ್ನ ಉಕ್ತಲೇಖನ ರೀತ್ಯಾ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ದ.ಕ., ಮಂಗಳೂರು, ಕಾರ್ಯನಿರ್ವಹಣೆಃ ಪುತ್ತೂರು.